ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಕಾಲೇಜುಗಳ ಸಿಬ್ಬಂದಿವರ್ಗ ಕುರಿತು

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

941 (1070) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಕಾಲೇಜುಗಳಲ್ಲಿ ಸ್ಥಳೀಯ ಅಭ್ಯರ್ಥಿಯಾಗಿ ಕರಾರು ಆಧಾರದ ಮೇಲೆ ನೇಮಕಾತಿ ಹೊಂದಿ, ನಂತರ ಖಾಯಂಮಾತಿಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಪ್ರಭಾರ ಪ್ರಾಂಶುಪಾಲರ ಸಂಖ್ಯೆ ಎಷ್ಟು ಮತ್ತು ಅನ್ಯ ಕಾರ್ಯನಿಮಿತ್ತ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರ ಸಂಖ್ಯೆ ಎಷ್ಟು ;

(ಆ) ಸದರಿ ಪ್ರಾಂಶುಪಾಲರುಗಳಿಗೆ ಯಾವ ಮಾನದಂಡದ ಆಧಾರದ ಮೇಲೆ ಪದೋನ್ನತಿ ನೀಡಲಾಗುತ್ತಿದೆ ; ಈ ಪದೋನ್ನತಿಯು ನ್ಯಾಯಯುತವಾಗಿ ನಡೆದಿದೆಯೇ ;

(ಇ) ಕರಾರು ಆಧಾರದ ಮೇಲೆ ನೇಮಕಾತಿ ಹೊಂದಿ ಖಾಯಂಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರುಗಳಿಗೆ ಪದೋನ್ನತಿ ವಿಚಾರದಲ್ಲಿ ಸೂಕ್ತ ನ್ಯಾಯ ದೊರಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸೇವಾ ಹಿರಿತನ ಮತ್ತು ಕಿರಿತನವು ಪದೋನ್ನತಿ ವಿಚಾರದಲ್ಲಿ ಅನ್ವಯವಾಗುತ್ತಿದೆಯೇ ; ಸೇವಾ ಹಿರಿತನ ಹೊಂದಿರುವವರಿಗೆ ಪದೋನ್ನತಿಯು ನ್ಯಾಯಬದ್ಧವಾಗಿ ಮತ್ತು ಕರಡು ನಿಯಮದಂತೆ ದೊರಕದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸುಮಾರು 18 ರಾಜ್ಯಗಳಲ್ಲಿ ಸೇವಾ ಜ್ಯೇಷ್ಠತೆಯ ಆಧಾರದ ಮೇಲೆಯೇ ಪ್ರಾಂಶುಪಾಲರುಗಳನ್ನು ನೇಮಕ ಮಾಡಲಾಗಿದ್ದು, ರಾಜ್ಯದಲ್ಲಿಯೂ ಸಹ ಯು.ಜಿ.ಸಿ. ವೇತನ ಶ್ರೇಣಿಯನ್ನು ಅನುಷ್ಠಾನಗೊಳಿಸಿದ ಪೂರ್ವದಲ್ಲಿ ನೇಮಕಗೊಂಡವರನ್ನು ಸೇವಾ ಜ್ಯೇಷ್ಠತೆಯ ಮೇಲೆ ಪ್ರಾಂಶುಪಾಲರನ್ನಾಗಿ ನೇಮಕ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಇದಕ್ಕೆ ಕಾಲಮಿತಿ ಎಷ್ಟು ?